ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಯೆನಪೋಯ ಹೋಮಿಯೋಪತಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ದೇರಳಕಟ್ಟೆ, ಮಂಗಳೂರು ಇವರಿಗೆ BHMS ಪದವಿ ಕೋರ್ಸ್‌ನ್ನು 100 ವಿದ್ಯಾರ್ಥಿಗಳ ಪ್ರವೇಶಾತಿಯೊಂದಿಗೆ 2018-19ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಿರುವುದಕ್ಕೆ ಘಟನೋತ್ತರ ಅನುಮತಿ ನೀಡುವ ಕುರಿತು.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಆಕುಕ 109 ಪಿಟಿಡಿ 2017, ದಿನಾಂಕ:28.04.2017.
2. ಭಾರತ ಸರ್ಕಾರ ಆಯುಷ್ ಮಂತ್ರಾಲಯ, New Delhi ರವರ ಪತ್ರ ಸಂಖ್ಯೆ: F.No.R. 12014/28/2017 EP(H) ದಿ:23.10.2018.
3. ಆಯುಕ್ತರು, ಆಯುಷ್ ಇಲಾಖೆ ಇವರ ಪತ್ರ ಸಂಖ್ಯೆ: ಆಯುಷ್/17/ವೈಶಿ(2)/2017-18 ದಿನಾಂಕ:04.04.2025.

******

ಪ್ರಸ್ತಾವನೆ

ಮೇಲೆ ಓದಲಾದ ಕ್ರ.ಸಂ.(1)ರ ಸರ್ಕಾರದ ಪತ್ರದಲ್ಲಿ 2018-19ನೇ ಶೈಕ್ಷಣಿಕ ಸಾಲಿನಿಂದ ಯೆನೆಪೋಯ ಹೋಮಿಯೋಪಥಿ ವೈದ್ಯಕೀಯ ಮಹಾವಿದ್ಯಾಲಯ & ಆಸ್ಪತ್ರೆ, ಮಂಗಳೂರು ಇವರಿಗೆ BHMS ಪದವಿ ಕೋರ್ಸ್‌ನ್ನು 100 ಸೀಟುಗಳ ಪ್ರವೇಶ ಮಿತಿಯೊಂದಿಗೆ ಪ್ರಾರಂಭಿಸಲು ನಮೂನೆ 04 ರಲ್ಲಿ ನಿರಾಕ್ಷೇಪಣಾ ಪತ್ರವನ್ನು ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರ.ಸಂ. (2) ರ ಪತ್ರದಲ್ಲಿ, ಭಾರತ ಸರ್ಕಾರದ ಆಯುಷ್ ಮಂತ್ರಾಲಯದ ಪತ್ರದಲ್ಲಿ ಯೆನೆಪೋಯ ಹೋಮಿಯೋಪಥಿ ವೈದ್ಯಕೀಯ ಮಹಾವಿದ್ಯಾಲಯ & ಆಸ್ಪತ್ರೆ, ಮಂಗಳೂರು ಇವರಿಗೆ BHMS ಪದವಿ ಕೋರ್ಸ್‌ನ್ನು 100 ಸೀಟುಗಳ ಪ್ರವೇಶ ಮಿತಿಯೊಂದಿಗೆ ಪ್ರಾರಂಭಿಸಲು Letter of Permission ನೀಡಿರುತ್ತದೆ. ಯೆನಪೋಯ ಹೋಮಿಯೋಪಥಿ ಮಹಾವಿದ್ಯಾಲಯ, ಮಂಗಳೂರು ಸಂಸ್ಥೆಯು deemed to be university ಅಂಗವಾಗಿರುವುದರಿಂದ RGUHS ನಿಂದ ಫಾರಂ-5 ಪಡೆಯಬೇಕಿರುವುದಿಲ್ಲ.

ಮೇಲೆ ಓದಲಾದ ಕ್ರ.ಸಂ. (3)ರ ಪತ್ರದಲ್ಲಿ ಆಯುಕ್ತರು, ಆಯುಷ್ ಇಲಾಖೆ ರವರು ಯೆನಪೋಯ ಹೋಮಿಯೋಪತಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ದೇರಳಕಟ್ಟೆ, ಮಂಗಳೂರು ಇವರಿಗೆ BHMS ಪದವಿ ಕೋರ್ಸ್‌ನ್ನು 100 ವಿದ್ಯಾರ್ಥಿಗಳ ಪ್ರವೇಶಾತಿಯೊಂದಿಗೆ 2018-19ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಿರುವುದಕ್ಕೆ ಘಟನೋತ್ತರ ಅನುಮತಿ ನೀಡಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಆಯುಕ್ತರು, ಆಯುಷ್ ಇಲಾಖೆ ಇವರ ಪತ್ರ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಯೆನಪೋಯ ಹೋಮಿಯೋಪತಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ದೇರಳಕಟ್ಟೆ, ಮಂಗಳೂರು ಇವರಿಗೆ BHMS ಪದವಿ ಕೋರ್ಸ್‌ನ್ನು 100 ವಿದ್ಯಾರ್ಥಿಗಳ ಪ್ರವೇಶಾತಿಯೊಂದಿಗೆ 2018-19ನೇ ಶೈಕ್ಷಣಿಕ

SCAN AnyScanner

ಸಾಲಿನಿಂದ ಪ್ರಾರಂಭಿಸಿರುವುದಕ್ಕೆ ಘಟನೋತ್ತರ ಅನುಮತಿ ನೀಡಲು ಸರ್ಕಾರವು ನಿರ್ಧರಿಸಿ, ಅದರಂತೆ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ:ಆಕುಕ 175 ಪಿಟಿಡಿ 2023
ಬೆಂಗಳೂರು, ದಿನಾಂಕ:20.06.2026.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಯೆನಪೋಯ ಹೋಮಿಯೋಪತಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ದೇರಳಕಟ್ಟೆ, ಮಂಗಳೂರು ಇವರಿಗೆ BHMS ಪದವಿ ಕೋರ್ಸ್‌ನ್ನು 100 ವಿದ್ಯಾರ್ಥಿಗಳ ಪ್ರವೇಶಾತಿಯೊಂದಿಗೆ 2018-19ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಿರುವುದಕ್ಕೆ ಈ ಕೆಳಕಂಡ ಷರತ್ತುಗೊಳಪಟ್ಟು ಘಟನೋತ್ತರ ಅನುಮತಿ ನೀಡಿ ಆದೇಶಿಸಿದೆ.

ಸದರಿ ಸಂಸ್ಥೆಯು ಈ ಕೆಳಕಂಡ ಷರತ್ತುಗಳನ್ನು ಪಾಲಿಸತಕ್ಕದ್ದು:

1. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಎಲ್ಲಾ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
2. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮ/ಆದೇಶಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು ಮತ್ತು ಸರ್ಕಾರಿ ಕೋಟಾ * ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.
3. National Commission for Homeopathy ಸಂಸ್ಥೆಯು ನಿಗದಿಪಡಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
4. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
5. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
6. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
7. ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಕೋರ್ಸ್‌ನ ಶುಲ್ಕಗಳನ್ನು ಮಾತ್ರ ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದು ಮತ್ತು ಸಕ್ಷಮ ಪ್ರಾಧಿಕಾರದಿಂದ ಮಂಜೂರಾದ ಸೀಟುಗಳಲ್ಲಿ ಕಾಲಕಾಲಕ್ಕೆ ಸರ್ಕಾರವು ನಿಗದಿಪಡಿಸುವ ಅನುಪಾತದಲ್ಲಿ ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.
8. ಸಂಸ್ಥೆಯ ಆರ್ಥಿಕ ಸ್ಥಿತಿಯನ್ನು ಆಯುಕ್ತರು, ಆಯುಷ್ ಇಲಾಖೆ, ಇವರು, ಖಚಿತಪಡಿಸಿಕೊಳ್ಳುವುದು.

SCAN AnyScanner

9. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಶ್ರೀಪತಿ ಪಿ.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
(ಭಾವೈಪ ಮತ್ತು ಸಮನ್ವಯ)

ಇವರಿಗೆ:

1. ಆಯುಕ್ತರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು
2. ಪ್ರಾಚಾರ್ಯರು, ಯೆನಪೋಯ ಹೋಮಿಯೋಪತಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ದೇರಳಕಟ್ಟೆ, ಮಂಗಳೂರು-575018.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕ ವಿಕಾಸ ಸೌಧ, ಬೆಂಗಳೂರು.

AnyScanner